# National
# Kannada
# 14.09.2025 1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ಅಸ್ಸಾಂನಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದ ಪ್ರಧಾನಿ ನರೇಂದ್ರ ಮೋದಿ
2. ನವದೆಹಲಿಯಲ್ಲಿ ನಾಳೆಯಿಂದ ೨ ದಿನಗಳ ರಾಷ್ಟ್ರೀಯ ಕೃಷಿ ಸಮ್ಮೇಳನ ಹಿಂಗಾರು ಅಭಿಯಾನ ೨೦೨೫ ಆರಂಭ.
3. ಐದನೇ ಜಾಗತಿಕ ಕರಾವಳಿ ಕಾವಲು ಶೃಂಗಸಭೆ ; ೨೦೨೭ ರಲ್ಲಿ ಭಾರತದಲ್ಲಿ ಆಯೋಜನೆ
4. ವಿಶ್ವ ಬಾಕ್ಸಿಂಗ್ ಚಾಂಪಿಯನ್‌ಶಿಪ್ : ಚಿನ್ನದ ಪದಕ ಗೆಲ್ಲುವ ಮೂಲಕ ಇತಿಹಾಸ ನಿರ್ಮಿಸಿದ ಭಾರತದ ಜೈಸ್ಮಿನ್ ಲಂಬೋರಿಯಾ

<><><><>

ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಅಸ್ಸಾಂನ ದರ್‍ರಾಂಗ್‌ನಲ್ಲಿ ಮಹತ್ವದ ಮೂಲಸೌಕರ್ಯ ಮತ್ತು ಕೈಗಾರಿಕಾ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದರು. ದರ್‍ರಾಂಗ್ ಜಿಲ್ಲೆಯ ಮಂಗಲ್ದೋಯ್‌ನಲ್ಲಿ ಪ್ರಧಾನಿ ಹೊಸ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ, ಜಿಎನ್‌ಎಂ ಶಾಲೆ ಮತ್ತು ಬಿಎಸ್ಸಿ ನರ್ಸಿಂಗ್ ಕಾಲೇಜು ಸೇರಿದಂತೆ ಆರೋಗ್ಯ ಶಿಕ್ಷಣ ಯೋಜನೆಗಳ ಸಮೂಹಕ್ಕೆ ಅಡಿಪಾಯ ಹಾಕಿದರು. ಹೆಚ್ಚುವರಿಯಾಗಿ, ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ಹಾಗೂ ನಗರ ಸಂಪರ್ಕವನ್ನು ಸುಧಾರಿಸಲು ಉದ್ದೇಶಿಸಲಾದ ಗುವಾಹಟಿ ರಿಂಗ್ ರಸ್ತೆ ಯೋಜನೆ ಮತ್ತು ಪ್ರಾದೇಶಿಕ ಸಾರಿಗೆ ಸಂಪರ್ಕಗಳನ್ನು ಹೆಚ್ಚಿಸುವ ನಿರೀಕ್ಷೆಯಿರುವ ಮೂಲಸೌಕರ್ಯ ಅಭಿವೃದ್ಧಿಯಾದ ಬ್ರಹ್ಮಪುತ್ರದ ಮೇಲಿನ ಕುರುವಾ-ನರೇಂಗಿ ಸೇತುವೆಗೆ ಅಡಿಪಾಯ ಹಾಕಲಾಯಿತು. ಮಧ್ಯಾಹ್ನದ ನಂತರ, ಪ್ರಧಾನಿ ಮೋದಿ ಗೋಲಾಘಾಟ್ ಜಿಲ್ಲೆಯ ನುಮಾಲಿಗಢಕ್ಕೆ ಪ್ರಯಾಣಿಸಲಿದ್ದಾರೆ. ಅಲ್ಲಿ, ಸುಸ್ಥಿರ ಇಂಧನ ಉತ್ಪಾದನೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ಶುದ್ಧ ಇಂಧನ ಉಪಕ್ರಮವಾದ ಅಸ್ಸಾಂ ಬಯೋ-ಎಥನಾಲ್ ಪ್ರೈವೇಟ್ ಲಿಮಿಟೆಡ್‌ನ ಸ್ಥಾವರವನ್ನು ಅವರು ಉದ್ಘಾಟಿಸಲಿದ್ದಾರೆ. ಇದಲ್ಲದೆ, ನುಮಾಲಿಗಢ ರಿಫೈನರಿ ಲಿಮಿಟೆಡ್) ನಲ್ಲಿ ಪಾಲಿಪ್ರೊಪಿಲೀನ್ ಸ್ಥಾವರಕ್ಕೆ ಅಡಿಪಾಯ ಹಾಕಲಾಗುವುದು, ಇದು ಪೆಟ್ರೋಕೆಮಿಕಲ್ ವಲಯವನ್ನು ಬಲಪಡಿಸುವ ಮತ್ತು ಗಣನೀಯ ಉದ್ಯೋಗವನ್ನು ಸೃಷ್ಟಿಸುವ ನಿರೀಕ್ಷೆಯಿದೆ.

<><><><>

ನವದೆಹಲಿಯಲ್ಲಿ ೨ ದಿನಗಳ ರಾಷ್ಟ್ರೀಯ ಕೃಷಿ ಸಮ್ಮೇಳನ- ಹಿಂಗಾರು ಅಭಿಯಾನ ೨೦೨೫ ನಾಳೆ ಆರಂಭವಾಗಲಿದೆ. ಈ ಸಮ್ಮೇಳನದ ಅಧ್ಯಕ್ಷತೆಯನ್ನು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ವಹಿಸಲಿದ್ದು, ಕೃಷಿ ತಜ್ಞರು, ವಿಜ್ಞಾನಿಗಳು ಮತ್ತು ನೀತಿ ನಿರೂಪಕರನ್ನು ಒಟ್ಟುಗೂಡಿಸಿ, ಹಿಂಗಾರು ಬೆಳೆಗಳ ಮೇಲಿನ ಸವಾಲುಗಳನ್ನು ಚರ್ಚಿಸಲಾಗುತ್ತದೆ. ಕೃಷಿ ಸಮ್ಮೇಳನವು ಹಿಂಗಾರು ಋತುವಿನ ಕ್ರಿಯಾ ಯೋಜನೆ ಮತ್ತು ಉತ್ಪಾದನಾ ತಂತ್ರಗಳಿಗೆ ಮಾರ್ಗದರ್ಶನ ನೀಡಲು ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಎರಡನೇ ಹಂತದ ಭಾಗವಾಗಿದೆ. ಈ ಸಮ್ಮೇಳನವು ರೈತರ ಆದಾಯವನ್ನು ಹೆಚ್ಚಿಸುವುದು, ಸುಸ್ಥಿರ ಕೃಷಿ ವ್ಯವಸ್ಥೆಗಳನ್ನು ಖಚಿತಪಡಿಸಿಕೊಳ್ಳುವುದು ಹಾಗೂ ರಾಷ್ಟ್ರೀಯ ಆಹಾರ ಭದ್ರತೆಯ ಕಡೆಗೆ ಪ್ರಮುಖ ಹೆಜ್ಜೆಯಾಗುವ ನಿರೀಕ್ಷೆಯಿದೆ.

<><><>

ವಿಶ್ವ ಮಟ್ಟದ ಐದನೇ ಕರಾವಳಿ ಕಾವಲು ಜಾಗತಿಕ ಶೃಂಗಸಭೆ ೨೦೨೭ರಲ್ಲಿ ಭಾರತದಲ್ಲಿ ನಡೆಯಲಿದೆ. ಇಟಲಿಯ ರೋಮ್ ನಲ್ಲಿ ನಡೆದ ೪ನೇ ಕರಾವಳಿ ಕಾವಲು ಜಾಗತಿಕ ಶೃಂಗಸಭೆಯಲ್ಲಿ ಈ ಕುರಿತ ಬಿಡ್ ನಲ್ಲಿ ಭಾರತ ಗೆದ್ದಿದೆ ಎಂದು ಘೋಷಣೆ ಮಾಡಲಾಗಿದೆ. ಇದು ಸಾಗರ ವಹಿವಾಟುಗಳಲ್ಲಿ ಭಾರತದ ಬೆಳೆಯುತ್ತಿರುವ ನಾಯಕತ್ವವನ್ನು ತೋರಿಸುತ್ತಿದ್ದು, ಗಮನಾರ್ಹ ಮೈಲುಗಲ್ಲಾಗಿದೆ ಎಂದು ಭಾರತೀಯ ಕಾವಲು ಪಡೆ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದೆ. ಜಾಗತಿಕ ಕರಾವಳಿ ಕಾವಲು ಸಹಕಾರ ಕುರಿತಾಗ ಈ ಶೃಂಗಸಭೆಯಲ್ಲಿ ೧೧೫ ದೇಶಗಳ ಸಂಘಟನೆಗಳು ಪಾಲ್ಗೊಂಡಿದ್ದವೆಂದು ಭಾರತೀಯ ಕರಾವಳಿ ಪಡೆಯ ಮಹಾ ನಿರ್ದೇಶಕ ಪರಮೇಶ್ ಶಿವಮಣಿ ತಿಳಿಸಿದ್ದಾರೆ. ೨೦೨೭ರ ಐದನೇ ಕರಾವಳಿ ಕಾವಲು ಜಾಗತಿಕ ಶೃಂಗಸಭೆ, ಚೆನ್ನೈನಲ್ಲಿ ಭಾರತದ ಕರಾವಳಿ ಕಾವಲು ಪಡೆಯ ಸ್ವರ್ಣ ಜಯಂತಿ ಸಂದರ್ಭದಲ್ಲೇ ನಡೆಯಲಿರುವುದು ವಿಶೇಷವೆನಿಸಿದೆ.

<><><>

ದೇಶಾದ್ಯಂತ ಇಂದು ಹಿಂದಿ ದಿವಸ್ ಆಚರಿಸಲಾಗುತ್ತಿದೆ. ೧೯೪೯ ರ ಈ ದಿನದಂದು ಸಂವಿಧಾನ ಸಭೆಯು ದೇವನಾಗರಿ ಲಿಪಿಯಲ್ಲಿ ಬರೆಯಲಾದ ಹಿಂದಿಯನ್ನು ದೇಶದ ಅಧಿಕೃತ ಭಾಷೆಯಾಗಿ ಅಳವಡಿಸಿಕೊಂಡಿತು. ಇಂದು, ಹಿಂದಿ ವಿಶ್ವದಲ್ಲಿ ವ್ಯಾಪಕವಾಗಿ ಮಾತನಾಡುವ ಭಾಷೆಗಳಲ್ಲಿ ಒಂದಾಗಿದೆ ಮತ್ತು ೫೨೦ ದಶಲಕ್ಷಕ್ಕೂ ಹೆಚ್ಚು ಜನರ ಮೊದಲ ಭಾಷೆಯಾಗಿದೆ. ಈ ಸಂದರ್ಭದಲ್ಲಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಗುಜರಾತ್‌ನ ಗಾಂಧಿನಗರದಲ್ಲಿರುವ ಮಹಾತ್ಮ ಮಂದಿರದಲ್ಲಿ ಐದನೇ ಅಖಿಲ ಭಾರತೀಯ ರಾಜಭಾಷಾ ಸಮ್ಮೇಳನವನ್ನು ಉದ್ಘಾಟಿಸಿದರು. ಎರಡು ದಿನಗಳ ಸಮ್ಮೇಳನದಲ್ಲಿ ಕೇಂದ್ರ ಸರ್ಕಾರದ ವಿವಿಧ ಇಲಾಖೆಗಳ ೭,೦೦೦ ಕ್ಕೂ ಹೆಚ್ಚು

ಅಧಿಕಾರಿಗಳು ಭಾಗವಹಿಸಲಿದ್ದಾರೆ. ಸಮ್ಮೇಳನದ ಸಮಯದಲ್ಲಿ ಆಪರೇಷನ್ ಸಿಂಧೂರ್ ಕುರಿತು ವಿಶೇಷ ಅಧಿವೇಶನ ಸೇರಿದಂತೆ ವಿವಿಧ ಅಧಿವೇಶನಗಳು ನಡೆಯಲಿವೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಹಿಂದಿ ದಿವಸ್ ಸಂದರ್ಭದಲ್ಲಿ ದೇಶದ ಜನರಿಗೆ ಶುಭಾಶಯ ಕೋರಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಹಿಂದಿ ಕೇವಲ ಸಂವಹನ ಮಾಧ್ಯಮವಲ್ಲ, ಬದಲಾಗಿ ದೇಶದ ಗುರುತು ಮತ್ತು ಮೌಲ್ಯಗಳ ರೋಮಾಂಚಕ ಪರಂಪರೆಯಾಗಿದೆ ಎಂದು ಮೋದಿ ಹೇಳಿದ್ದಾರೆ.

<><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ಹಿಂದಿ ದಿವಸ್ ಸಂದರ್ಭದಲ್ಲಿ ಶುಭಾಶಯ ಕೋರಿದ್ದಾರೆ. ತಮ್ಮ ಸಂದೇಶದಲ್ಲಿ ಅವರು ಹಿಂದಿ ಭಾಷೆಯು ದೇಶದ ಭಾಷೆಗಳು ಮತ್ತು ಉಪಭಾಷೆಗಳ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ, ರಾಷ್ಟ್ರೀಯ ಏಕತೆಯನ್ನು ಉತ್ತೇಜಿಸುತ್ತದೆ ಮತ್ತು ತಂತ್ರಜ್ಞಾನ, ವಿಜ್ಞಾನ ಮತ್ತು ಸಂಶೋಧನೆಯ ಭಾಷೆಯಾಗಿ ಹೊರಹೊಮ್ಮುತ್ತದೆ ಎಂದು ಹೇಳಿದ್ದಾರೆ. ೨೦೧೪ ರಿಂದ ಅಧಿಕೃತ ಕೆಲಸಗಳಲ್ಲಿ ಹಿಂದಿ ಭಾಷೆಯು ಅಭಿವೃದ್ಧಿ ಹೊಂದಿದ ಮತ್ತು ಭಾಷಾವಾರು ಸ್ವಾವಲಂಬಿ ಭಾರತವನ್ನು ನಿರ್ಮಿಸುವಲ್ಲಿ ಹಿಂದಿ ಎಲ್ಲಾ ಭಾಷೆಗಳನ್ನು ಜೊತೆಗೆ ಕರೆದೊಯ್ಯುವ ಮೂಲಕ ಪ್ರಮುಖ ಪಾತ್ರ ವಹಿಸುವುದನ್ನು ಮುಂದುವರಿಸುತ್ತದೆ ಎಂದು ಅಮಿತ್ ಶಾ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><><>

ಜಮ್ಮು ಮತ್ತು ಕಾಶ್ಮೀರದ ರಿಯಾಸಿ ಜಿಲ್ಲೆಯಲ್ಲಿ ನಿರಂತರ ಮಳೆಯಿಂದಾಗಿ ಹಲವಾರು ದಿನಗಳವರೆಗೆ ಸ್ಥಗಿತಗೊಂಡಿದ್ದ ಮಾತಾ ವೈಷ್ಣೋದೇವಿ ದೇಗುಲದ ಯಾತ್ರೆಯನ್ನು ಮುಂದಿನ ಆದೇಶದವರೆಗೆ ಮುಂದೂಡಲಾಗಿದೆ. ಮಾತಾ ವೈಷ್ಣೋದೇವಿ ದೇಗುಲ ಮಂಡಳಿ ಸಾಮಾಜಿಕ ಮಾಧ್ಯಮದಲ್ಲಿ ಈ ಮಾಹಿತಿ ನೀಡಿದೆ. ಎಲ್ಲಾ ಯಾತ್ರಿಕರ ಸುರಕ್ಷತೆ ಮತ್ತು ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ಯಾತ್ರೆಯನ್ನು ಮುಂದೂಡಲಾಗಿದೆ . ಈ ಮೊದಲು, ಆಡಳಿತ ಮಂಡಳಿಯು ಇಂದು ತೀರ್ಥಯಾತ್ರೆಯನ್ನು ಪುನರಾರಂಭಿಸಲು ಯೋಜಿಸಿತ್ತು, ಆದರೆ ಪ್ರತಿಕೂಲ ಹವಾಮಾನ ಪರಿಸ್ಥಿತಿಗಳು ಪುನರಾರಂಭವನ್ನು ವಿಳಂಬಗೊಳಿಸಿದೆ.

<><><>

ಭಾರತದ ಜೈಸ್ಮಿನ್ ಲಂಬೋರಿಯಾ ಯುನೈಟೆಡ್ ಕಿಂಗ್‌ಡಮ್‌ನ ಲಿವರ್‌ಪೂಲ್‌ನಲ್ಲಿ ನಡೆದ ೨೦೨೫ ರ ವಿಶ್ವ ಬಾಕ್ಸಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಚಿನ್ನದ ಪದಕ ಗೆಲ್ಲುವ ಮೂಲಕ ಇತಿಹಾಸದಲ್ಲಿ ತಮ್ಮ ಹೆಸರನ್ನು ಬರೆದಿದ್ದಾರೆ.

ಕಾಮನ್‌ವೆಲ್ತ್ ಕ್ರೀಡಾಕೂಟದ ಪದಕ ವಿಜೇತೆ ತೀವ್ರ ಪೈಪೋಟಿಯಿಂದ ಕೂಡಿದ ಮಹಿಳೆಯರ ೫೭ ಕೆಜಿ ವಿಭಾಗದ ಫೈನಲ್‌ನಲ್ಲಿ ಪೋಲೆಂಡ್‌ನ ಜೂಲಿಯಾ ಸ್ವೆರೆಮೆಟಾ ಅವರನ್ನು ೪-೧ ರ ಮೂಲಕ ಸೋಲಿಸಿ ಜಯಗಳಿಸಿದರು.

<><><><>

ಸಾಂಪ್ರದಾಯಿಕ ಎದುರಾಳಿಗಳಾದ ಭಾರತ ಮತ್ತು ಪಾಕಿಸ್ತಾನ ತಂಡಗಳ ನಡುವಿನ ಏಷ್ಯಾ ಕಪ್ ಟಿ-೨೦ ಕ್ರಿಕೆಟ್ ಪಂದ್ಯ ಇಂದು ದುಬೈನ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿದೆ. ಎ ಗುಂಪಿನಲ್ಲಿರುವ ಭಾರತ ತಂಡ, ತನ್ನ ಆರಂಭಿಕ ಪಂದ್ಯದಲ್ಲಿ ಆತಿಥೇಯ ಯುಎಇ ತಂಡವನ್ನು ಮಣಿಸಿ ಭರ್ಜರಿ ಆರಂಭ ಮಾಡಿದೆ. ಹಾಗೆಯೇ ಪಾಕಿಸ್ತಾನ ತಂಡ ತನ್ನ ಆರಂಭಿಕ ಪಂದ್ಯದಲ್ಲಿ ಒಮನ್ ತಂಡವನ್ನು ಸೋಲಿಸಿ ಭಾರತದ ಸವಾಲಿಗೆ ಸಜ್ಜಾಗಿದೆ. ಪಂದ್ಯ ಭಾರತೀಯ ಕಾಲಮಾನ ಇಂದು ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

<><><><>

ಭಾರತ ಮಹಿಳಾ ಹಾಕಿ ತಂಡವು ಇಂದು ಸಂಜೆ ಹ್ಯಾಂಗ್‌ಝೌನಲ್ಲಿ ನಡೆಯಲಿರುವ ಪಂದ್ಯದಲ್ಲಿ ಆತಿಥೇಯ ಚೀನಾವನ್ನು ಎದುರಿಸಲಿದೆ. ಈ ಪಂದ್ಯವು ಭಾರತೀಯ ಕಾಲಮಾನ ಸಂಜೆ ೫.೩೦ ಕ್ಕೆ ಪ್ರಾರಂಭವಾಗುತ್ತದೆ. ನಿನ್ನೆ ನಡೆದ ನಿರ್ಣಾಯಕ ಸೂಪರ್ ೪ ಹಂತದ ಪಂದ್ಯದಲ್ಲಿ ಭಾರತವು ಹಾಲಿ ಚಾಂಪಿಯನ್ ಜಪಾನ್ ವಿರುದ್ಧ ೧-೧ ಅಂತರದ ರೋಮಾಂಚಕ ಡ್ರಾ ಸಾಧಿಸಿತು.

<><><><>

ಮಹಿಳಾ ಕ್ರಿಕೆಟ್‌ನಲ್ಲಿ, ಆತಿಥೇಯ ಭಾರತ ತಂಡವು ಇಂದು ಚಂಡೀಗಢದಲ್ಲಿ ನಡೆಯಲಿರುವ ನಿರ್ಣಾಯಕ ಮೂರು ಪಂದ್ಯಗಳ ಸರಣಿಯ ಮೊದಲ ಏಕದಿನ ಅಂತಾರಾಷ್ಟ್ರೀಯ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಸೆಣಸಲಿದೆ. ಈ ಪಂದ್ಯವು ಭಾರತೀಯ ಕಾಲಮಾನ ಮಧ್ಯಾಹ್ನ ೧:೩೦ ಕ್ಕೆ ಆರಂಭವಾಗಲಿದೆ. ೨೦೨೫ ರ ಐಸಿಸಿ ಮಹಿಳಾ ಏಕದಿನ ವಿಶ್ವಕಪ್ ಈ ತಿಂಗಳ ಕೊನೆಯಲ್ಲಿ ಪ್ರಾರಂಭವಾಗಲಿದೆ

<><><><>

ಚೀನಾದಲ್ಲಿ ನಡೆಯುತ್ತಿರುವ ಹಾಂಗ್ ಕಾಂಗ್ ಓಪನ್ ಸೂಪರ್ ೫೦೦ ಬ್ಯಾಡ್ಮಿಂಟನ್‌ನ ಪುರುಷರ ಸಿಂಗಲ್ಸ್ ಫೈನಲ್‌ನಲ್ಲಿಂದು, ಭಾರತದ ಲಕ್ಷ್ಯ ಸೇನ್, ಚೀನಾದ ಲಿ ಶಿಫೆಂಗ್ ಅವರನ್ನು ಎದುರಿಸಲಿದ್ದಾರೆ. ಮತ್ತೊಂದೆಡೆ ಪುರುಷರ ಡಬಲ್ಸ್ ವಿಭಾಗದ ಪೈನಲ್ ಪಂದ್ಯದಲ್ಲಿ ಇಂದು ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಚೀನಾದ ಲಿಯಾಂಗ್ ವೀಕೆಂಗ್ ಮತ್ತು ವಾಂಗ್ ಚಾಂಗ್ ಜೋಡಿಯನ್ನು ಎದುರಿಸಲಿದೆ.

<><><><>

ವಿಶ್ವ ಪ್ಯಾರಾ ಅಥ್ಲೆಟಿಕ್ ಚಾಂಪಿಯನ್ ಶಿಪ್ ಇದೇ ತಿಂಗಳ ೨೭ರಂದು ನವದೆಹಲಿಯ ಜವಹರಲಾಲ್ ನೆಹರು ಕ್ರೀಡಾಂಗಣದಲ್ಲಿ ಆರಂಭವಾಗಲಿದೆ. ೧೦೪ ದೇಶಗಳ ೨ ಸಾವಿರದ ೨೦೦ಕ್ಕೂ ಹೆಚ್ಚು ವಿಶೇಷ ಚೇತನ ಕ್ರೀಡಾಪಟುಗಳು ಹಾಗೂ ಸಹಾಯಕರು ಇದರಲ್ಲಿ ಪಾಲ್ಗೊಳ್ಳಲಿದ್ದಾರೆ. ಒಟ್ಟು ೧೮೬ ವಿಭಾಗಗಳಲ್ಲಿ ಕ್ರೀಡೆಗಳು ನಡೆಯಲಿವೆ. ವಿಶ್ವ ಪ್ಯಾರಾ ಅಥ್ಲೆಟಿಕ್ ಚಾಂಪಿಯನ್ ಶಿಪ್ ಅಕ್ಟೋಬರ್ ೫ರವರೆಗೆ ನಡೆಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>